# ತುಮಕೂರು ವಿಶ್ವವಿದ್ಯಾನಿಲಯ

ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗ

ಡಾ. ಪಿ. ಸದಾನಂದಮಯ್ಯ ಕಟ್ಟಡ, ವಿಶ್ವವಿದ್ಯಾನಿಲಯ ಆವರಣ, ಬಿ.ಎಚ್. ರಸ್ತೆ, ತುಮಕೂರು- 572 103


ಸಂಖ್ಯೆ:ತುವಿ:ಸ್ನಾ.ಸ.ಕಾ..ಅ.ಸಂ.ವಿ:2025-26 ದಿನಾಂಕ:23.04.2026

## ದರಪಟ್ಟಿ ಆಹ್ವಾನ (ವಿವಿ ವೆಬ್ ಸೈಟ್)

**ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮಾಜಕಾರ್ಯ ವಿಭಾಗದ ವತಿಯಿಂದ ಜರುಗಲಿರುವ "SWARANG-2026 National level Social Work Student Fest" ಕಾರ್ಯಕ್ರಮಕ್ಕೆ ಹಾಸಿಗೆ, ದಿಂಬು ಮತ್ತು ಬೆಡ್ ಶೀಟ್ ಬಾಡಿಗೆಗೆ ಪಡೆಯಲು ದರಪಟ್ಟಿ ಆಹ್ವಾನಿಸಿರುವ ಕುರಿತು.**

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 08.05.2026 ಮತ್ತು 09.05.2026 ರಂದು ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ವತಿಯಿಂದ ಆಯೋಜಿಸಿರುವ **"SWARANG-2026 National level Social Work Student Fest"** ಕಾರ್ಯಕ್ರಮಕ್ಕೆ ಹಾಸಿಗೆ, ದಿಂಬು ಮತ್ತು ಬೆಡ್ ಶೀಟ್ ಬಾಡಿಗೆಗೆ ನೀಡಲು ಆಸಕ್ತ ಸಂಸ್ಥೆಗಳಿಂದ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ | ವಿವರ | ಅಂದಾಜು ಬಾಡಿಗೆ ಪ್ರಮಾಣ | ದರ ರೂ. ಪ್ರತಿ ಒಂದಕ್ಕೆ (ಎಲ್ಲಾ ತೆರಿಗೆ /ಸೇವೆ ಸೇರಿದಂತೆ) |
|---|---|---|---|
| 1 | ಹಾಸಿಗೆ, ದಿಂಬು ಮತ್ತು ಬೆಡ್ ಶೀಟ್ | 1000 | |

ಷರತ್ತು ಮತ್ತು ನಿಬಂಧನೆಗಳು:

1. ಮುಚ್ಚಿದ ಲಕೋಟೆಯ ಮೇಲೆ "ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಮಾಜಕಾರ್ಯ ವಿಭಾಗದ ವತಿಯಿಂದ ಜರುಗಲಿರುವ ರಾಷ್ಟ್ರೀಯ ಸಮಾಜ ಕಾರ್ಯ ವಿದ್ಯಾರ್ಥಿಗಳ ಹಬ್ಬದ ಕಾರ್ಯಕ್ರಮಕ್ಕೆ ಹಾಸಿಗೆ, ದಿಂಬು ಮತ್ತು ಬೆಡ್ ಶೀಟ್ ಬಾಡಿಗೆಗೆ ಪಡೆಯಲು ದರಪಟ್ಟಿ" ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು ಮುಖ್ಯಸ್ಥರು, ಸ್ನಾತಕೋತ್ತರ ಸಮಾಜಕಾರ್ಯ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ತುಮಕೂರು-572103 ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗಿರುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: **02.05.2026** ಪೂರ್ವಾಹ್ನ **11-00**
4. ದರಪಟ್ಟಿಯನ್ನು ದಿನಾಂಕ: **02.05.2026** ರಂದು ಅಪರಾಹ್ನ **12-00**ಕ್ಕೆ ತೆರೆಯಲಾಗುವುದು.
5. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
6. ಸರಬರಾಜು ಮಾಡಿದ 30 ದಿನಗಳೊಳಗೆ ಹುಂಡಿಯನ್ನು ವಿಶ್ವವಿದ್ಯಾನಿಲಯದ ನಿಯಮಾನುಸಾರ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು.
7. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.

8. ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
9. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು,
10. ದರಪಟ್ಟಿಯು ರೂ. ಒಂದು ಲಕ್ಷ ಮಿತಿಗೊಳಪಟ್ಟಿರತಕ್ಕದ್ದು.
11. ದರಪಟ್ಟಿಯಲ್ಲಿ ನಮೂದಿಸಿರುವ ಸಾಮಗ್ರಿಗಳ ಪ್ರಮಾಣವನ್ನು ಹೆಚ್ಚಿಸುವ, ಕಡಿಮೆಗೊಳಿಸುವ ಅಥವಾ ರದ್ದು ಪಡಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
12. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
13. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ **ಅಧ್ಯಕ್ಷರು, ಸ್ನಾತಕೋತ್ತರ ಸಮಾಜಕಾರ್ಯ ಆಧ್ಯಯನ ಮತ್ತು ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-572 103** ಇವರನ್ನು ಸಂಪರ್ಕಿಸುವುದು.

ಅಧ್ಯಕ್ಷರು
ಸ್ನಾತಕೋತ್ತರ ಸಮಾಜಕಾರ್ಯ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ

Chairman
Department of Post Graduate Studies
and Research in Social Work
Tumkur University, Tumkur.

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
3. ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು,
4. ಕಚೇರಿ ಪ್ರತಿ.